<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.</u>

<u>ಸಿಸಿ ನಂಃ **49/2022**</u>

| | | |
|---|---|---|
| ಹೆಸರು | ಲೋಕೇಶ್ | ಸಿ.ಡಬ್ಲ್ಯೂ **- 10** |
| ತಂದೆಯ ಹೆಸರು | ಪುಟ್ಟಸ್ವಾಮಾಚಾರಿ | ಪಿ.ಡಬ್ಲ್ಯೂ **- 10** |
| ವಯಸ್ಸು | 50 ವರ್ಷ | |
| ಉದ್ಯೋಗ | ಚಿನ್ನದ ಅಂಗಡಿಯಲ್ಲಿ ಕೆಲಸ | |
| ವಾಸ ಸ್ಥಳ | ಸಾತನೂರು | |

ಸಾಕ್ಷಿಗೆ ದಿನಾಂಕಃ 17.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಎ ಪಿ ಪಿ ರರಿಂದ ಃ</u>

ಈಗ ನೋಡುತ್ತಿರುವ ನಿಪಿ 9 ಕ್ಕೆ ಸುಮಾರು 2 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸಾಕ್ಷಿಯ ಸಹಿಯನ್ನು ನಿಪಿ 9 ಬಿ ಎಂದು ಗುರುತಿಸಲಾಯಿತು. ನಿಪಿ 9 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

<u>ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ</u>

ದಿ: 25.10.2021 ರಂದು ಅಪಘಾತದ ಸಂಬಂಧವಾಗಿ ಪೊಲೀಸರು ಪೊಲೀಸ್ ಠಾಣಾ ಆವರಣದಲ್ಲಿ ನನ್ನ ಮತ್ತು ಚಾಸಾ 11 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 10-45 ರ ಸಮಯದಲ್ಲಿ ನಿಪಿ 9 ರಂತೆ ಅಮಾನತ್ತು ಮಹಜರ್ ಜರುಗಿಸಿ, ಕೆಎ-05-ಜಡ್ -751 ನಂಬರ್‌ನ ಕಾರನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃಆರೋಪಿ ಪರ: ವಕೀಲರಿಂದ</u>

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.